ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಶೈವಿ/203/ಕೌಶಲ್ಯಾಭಿವೃದ್ಧಿ/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು – 560001,
ದಿನಾಂಕ : 04.01.2024.

## ಸುತ್ತೋಲೆ

ವಿಷಯ: ಕರ್ನಾಟಕ ಸ್ಕಿಲ್ ಕನೆಕ್ಟ್ ಪೋರ್ಟಲ್‌ನಲ್ಲಿ ಇಲಾಖೆಯ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳ ವಿದ್ಯಾರ್ಥಿಗಳನ್ನು ಕಡ್ಡಾಯವಾಗಿ ನೋಂದಣಿಗೊಳಿಸುವ ಮೂಲಕ ಉದ್ಯೋಗಾವಕಾಶವನ್ನು ಕಲ್ಪಿಸುವ ಬಗ್ಗೆ.

ಉಲ್ಲೇಖ: 1. ಅ.ಸ.ಪತ್ರ ಸಂಖ್ಯೆ: ಕೌಉಜೀಇ 8 ಕೌಗುಇ 2023, ದಿನಾಂಕ: 18.10.2023.

*****

ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ ಯುವ ಜನತೆಗೆ ಉಚಿತ ಕೌಶಲ್ಯಾಧಾರಿತ ತರಬೇತಿಯನ್ನು ನೀಡಲಾಗುತ್ತಿದ್ದು, ಅದರಂತೆ ರಾಜ್ಯದ ಎಲ್ಲಾ ಯುವ ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗಾವಕಾಶವನ್ನು ಕಲ್ಪಿಸುವ ನಿಟ್ಟಿನಲ್ಲಿ ಕರ್ನಾಟಕ ಸ್ಕಿಲ್ ಕನೆಕ್ಟ್ ಪೋರ್ಟಲ್ (https://skillconnect.kaushalkar.com/) ಅನ್ನು ಅನುಷ್ಠಾನಗೊಳಿಸಲಾಗಿದೆ.

ಕರ್ನಾಟಕ ಸ್ಕಿಲ್ ಕನೆಕ್ಟ್ ಪೋರ್ಟಲ್‌ನಡಿ ಉದ್ಯೋಗಾವಕಾಶವನ್ನು ಒದಗಿಸುವುದರ ಜೊತೆಗೆ, ಪೋರ್ಟಲ್ ವಿದ್ಯಾರ್ಥಿಗಳಿಗೆ ವ್ಯಕ್ತಿ ಪರಿಚಯ (Resume), ವೀಡಿಯೋ ವ್ಯಕ್ತಿ ಪರಿಚಯ (Video Resume), ಸೈಕೋಮೆಟ್ರಿಕ್ ಮತ್ತು ತಾಂತ್ರಿಕ ಕೌಶಲ್ಯ ಮೌಲ್ಯಮಾಪನಗಳು ಹಾಗೂ ಇ-ಕೌಶಲ್ಯ (ಕಲಿಕೆ ನಿರ್ವಹಣಾ ವ್ಯವಸ್ಥೆ) ಅಡಿ Infosys Springboard, IBM Skills Build, Future Skill by R.V. Skills Institute ಸಂಸ್ಥೆಗಳ ಸಹಭಾಗಿತ್ವದಡಿ 10,000 ಕ್ಕೂ ಅಧಿಕ ಡಿಜಿಟಲ್ ಸ್ಕಿಲ್ಲಿಂಗ್ ಕೋರ್ಸ್‌ಗಳನ್ನು ಕಲಿಯಲು ಅವಕಾಶ ನೀಡಲಾಗಿದ್ದು, Artificial Intelligence Engine ಮೂಲಕ ಅಗತ್ಯವಾದ ಉದ್ಯೋಗಾವಕಾಶಗಳನ್ನು, Apprenticeship, Internship ಗಳನ್ನು ಗುರುತಿಸಿ ಅಭ್ಯರ್ಥಿಗಳಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ, ಈಗಾಗಲೇ 450 ಕ್ಕೂ ಹೆಚ್ಚು ಉದ್ಯೋಗದಾತ ಸಂಸ್ಥೆಗಳನ್ನು ನೋಂದಾಯಿಸಿ ಕೊಳ್ಳಲಾಗಿದ್ದು 20,000 ಕ್ಕೂ ಅಧಿಕ ಹುದ್ದೆಗಳಿಗೆ ನೇಮಕಾತಿ ಕೈಗೊಳ್ಳಲು ಸ್ಕಿಲ್ ಕನೆಕ್ಟ್ ಪೋರ್ಟಲ್ ನಡಿ ಪ್ರಚುರಪಡಿಸಲಾಗಿದೆ.

ಕರ್ನಾಟಕ ಸ್ಕಿಲ್ ಕನೆಕ್ಟ್ ಪೋರ್ಟಲ್, ಈ ಮೇಲಿನ ಎಲ್ಲಾ ವೈಶಿಷ್ಟ್ಯತೆಗಳನ್ನು ಒಳಗೊಂಡಿದ್ದು, ಇಲಾಖೆಯ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳ ಪ್ರಾಂಶುಪಾಲರು ಮತ್ತು ಪ್ಲೇಸ್ಮೆಂಟ್ ಸೆಲ್ ಅಧಿಕಾರಿಗಳು, ಜಿಲ್ಲಾ ಕೌಶಲ್ಯಾಭಿವೃದ್ಧಿಯ ಸಹಯೋಗದಲ್ಲಿ ಕರ್ನಾಟಕ ಸ್ಕಿಲ್ ಕನೆಕ್ಟ್ ಪೋರ್ಟಲ್‌ಗೆ ಸಂಬಂಸಿದಂತೆ ಕಾರ್ಯಗಾರಗಳನ್ನು ಆಯೋಜಿಸಿ, ಎಲ್ಲಾ ವಿದ್ಯಾರ್ಥಿಗಳು ಕಡ್ಡಾಯವಾಗಿ ಸದರಿ ಪೋರ್ಟಲ್‌ನಲ್ಲಿ ನೋಂದಣಿಮಾಡಿಕೊಳ್ಳುವುದರ ಜೊತೆಗೆ ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶವನ್ನು ಕಲ್ಪಿಸುವ ನಿಟ್ಟಿನಲ್ಲಿ ಕ್ರಮವಹಿಸುವುದು.

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ:

1. ಕಾಲೇಜು ಶಿಕ್ಷಣ ಇಲಾಖೆಯ ಎಲ್ಲಾ ಪ್ರಾದೇಶಿಕ ಕಛೇರಿಯ ಜಂಟಿ ನಿರ್ದೇಶಕರುಗಳಿಗೆ-ಮಾಹಿತಿ ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ.
2. ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-ಮಾಹಿತಿ ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ.
3. ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳ ಪ್ಲೇಸ್ಮೆಂಟ್ ಸೆಲ್ ಅಧಿಕಾರಿಗಳಿಗೆ- ಮಾಹಿತಿ ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ.
4. ಮಾಹಿತಿ ಅಧಿಕಾರಿಗಳು, ಮಾಹಿತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು-ಸದರಿ ಆದೇಶವನ್ನು ಇಲಾಖಾ ವೆಬ್-ಸೈಟ್ ನಲ್ಲಿ ಪ್ರಕಟಿಸುವ ಸಂಬಂಧ ಅಗತ್ಯ ಕ್ರಮಕ್ಕಾಗಿ.

ಪ್ರತಿಗಳು:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕೊಠಡಿ ಸಂಖ್ಯೆ: 347, 3ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು-560001.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-560001.
3. ಕಛೇರಿ ಪ್ರತಿ.

ಉಮಾ ಮಹಾದೇವನ್, ಭಾ.ಆ.ಸೇ.,
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ,

Uma Mahadevan, I.A.S.,
Additional Chief Secretary to
Government,
Skill Development, Entrepreneurship and
Livelihood Department

ಕರ್ನಾಟಕ ಸರ್ಕಾರದ ಸಚಿವಾಲಯ,
ಕೊಠಡಿ ಸಂಖ್ಯೆ 347, 3ನೇ ಮಹಡಿ, ಗೇಟ್ ನಂ. 2
ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001

Karnataka Government Secretariat
Room No. 347, 3rd Floor, Gate No. 2,
M.S. Building, Bengaluru - 560 001
Tel : 080-22032996/22253724
e-mail : acs.skill@karnataka.gov.in/
secretaryskill@gmail.com
Website : https : // kaushalya.karnataka.gov.in

ಅ.ಸ.ಪತ್ರ ಸಂಖ್ಯೆ: ಕೌಉಜೀಇ 8 ಕೌಇಉ 2023 ದಿನಾಂಕ: 18.10.2023

ಶ್ರೀ ಉಮಾಶಂಕರ್ ರವರೆ,

ವಿಷಯ: ಕರ್ನಾಟಕ ಸ್ಕಿಲ್ ಕನೆಕ್ಟ್ ಪೋರ್ಟಲ್‌ನಲ್ಲಿ ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳ ಮತ್ತು ಪದವಿ ಕಾಲೇಜುಗಳ ವಿದ್ಯಾರ್ಥಿಗಳನ್ನು ಕಡ್ಡಾಯವಾಗಿ ನೋಂದಣಿಗೊಳಿಸುವ ಕುರಿತು.

ಉಲ್ಲೇಖ: ಈ ಕಛೇರಿಯ ಅ.ಸ. ಪತ್ರ ಸಮಸಂಖ್ಯೆ ದಿನಾಂಕ: 09.03.2023.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ ಈಗಾಗಲೇ ರಾಜ್ಯಾದ್ಯಂತ ರಾಜ್ಯ ಸರ್ಕಾರದ ಮಹಾತ್ವಾಕಾಂಕ್ಷಿ ಯೋಜನೆಗಳನ್ನು ಅನುಷ್ಠಾನಗೊಳಿಸುವ ಮೂಲಕ ರಾಜ್ಯದ ಯುವ ಜನತೆಗೆ ಉಚಿತ ಕೌಶಲ್ಯಾಧಾರಿತ ತರಬೇತಿಯನ್ನು ನೀಡಲಾಗುತ್ತಿದೆ. ಅದರಂತೆ ಕೌಶಲ್ಯಾಧಾರಿತ ತರಬೇತಿಯನ್ನು ಪಡೆದ ಯುವ ಜನತೆಯನ್ನು ಒಳಗೊಂಡಂತೆ ರಾಜ್ಯದ ಎಲ್ಲಾ ಯುವ ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗಾವಕಾಶವನ್ನು ಕಲ್ಪಿಸುವ ನಿಟ್ಟಿನಲ್ಲಿ ಕರ್ನಾಟಕ ಸ್ಕಿಲ್ ಕನೆಕ್ಟ್ ಪೋರ್ಟಲ್ (https://skillconnect.kaushalkar.com/) ಅನ್ನು ಡಿಸೆಂಬರ್ ಮಾಹೆ 2022 ರಂದು ಅಧಿಕೃತವಾಗಿ ಉದ್ಘಾಟಿಸಿ, ಅನುಷ್ಠಾನಗೊಳಿಸಲಾಗಿದೆ.

ಸದರಿ ಪೋರ್ಟಲ್ ನಡಿ ಉದ್ಯೋಗಾವಕಾಶಗಳನ್ನು ಒದಗಿಸುವುದರ ಹೊರತಾಗಿ, ಪೋರ್ಟಲ್ ವಿದ್ಯಾರ್ಥಿಗಳಿಗೆ ವ್ಯಕ್ತಿ ಪರಿಚಯ (Resume), ವೀಡಿಯೋ ವ್ಯಕ್ತಿ ಪರಿಚಯ (Video Resume), ಸೈಕೋಮೆಟ್ರಿಕ್ ಮೌಲ್ಯಮಾಪನಗಳು ಮತ್ತು ತಾಂತ್ರಿಕ ಕೌಶಲ್ಯ ಮೌಲ್ಯಮಾಪನಗಳು ಹಾಗೂ ಇ-ಕೌಶಲ್ಯ (ಕಲಿಕೆ ನಿರ್ವಹಣಾ ವ್ಯವಸ್ಥೆ) ಅಡಿ Infosys Springboard, IBM Skills Build, Future Skill by R.V. Skills Institute ಸಂಸ್ಥೆಗಳ ಸಹಭಾಗಿತ್ವದಡಿ 10,000 ಕ್ಕೂ ಅಧಿಕ ಡಿಜಿಟಲ್ ಸ್ಕಿಲ್ಲಿಂಗ್ ಕೋರ್ಸ್‌ಗಳನ್ನು ಕಲಿಯಲು ಅವಕಾಶ ನೀಡಲಾಗಿದ್ದು, Artificial Intelligence Engine ಮೂಲಕ ಅಗತ್ಯವಾದ ಉದ್ಯೋಗಾವಕಾಶಗಳನ್ನು, Apprenticeship, Internship ಗಳನ್ನು ಗುರುತಿಸಿ ಅಭ್ಯರ್ಥಿಗಳಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಈಗಾಗಲೇ 450 ಕ್ಕೂ ಹೆಚ್ಚು ಉದ್ಯೋಗದಾತ ಸಂಸ್ಥೆಗಳನ್ನು ನೋಂದಾಯಿಸಿ ಕೊಳ್ಳಲಾಗಿದ್ದು, 20,000 ಕ್ಕೂ ಅಧಿಕ ಹುದ್ದೆಗಳಿಗೆ ನೇಮಕಾತಿ ಕೈಗೊಳ್ಳಲು ಸ್ಕಿಲ್ ಕನೆಕ್ಟ್ ಪೋರ್ಟಲ್ ನಡಿ ಪ್ರಚುರಪಡಿಸಲಾಗಿದೆ.

ಈ ಎಲ್ಲಾ ವೈಶಿಷ್ಟ್ಯತೆಗಳನ್ನು ಒಳಗೊಂಡಿರುವ ವಿಭಿನ್ನ ಪೋರ್ಟಲ್ ಇದಾಗಿದ್ದು, ಪ್ರಸ್ತುತ ಅವಶ್ಯಕತೆಗೆ ತಕ್ಕಂತೆ ಸಮನ್ವಯತೆಯನ್ನು ಸಾಧಿಸುವ ಮೂಲಕ ಉದ್ಯಮಗಳ ಸಹಭಾಗಿತ್ವದಲ್ಲಿ ರಾಜ್ಯದ ಎಲ್ಲಾ ಯುವ ಜನತೆಗೆ ಉದ್ಯೋಗಾವಕಾಶವನ್ನು ವಿಸ್ತರಿಸುವ ಹಾಗೂ ಕಲ್ಪಿಸುವ ಮಹತ್ವಾಕಾಂಕ್ಷೆಯನ್ನು ಹೊಂದಿದ್ದು, ಈ ನಿಟ್ಟಿನಲ್ಲಿ ರಾಜ್ಯದ ಎಲ್ಲಾ ವಿಶ್ವ ವಿದ್ಯಾನಿಲಯಗಳ ಹಾಗೂ ಪದವಿ ಕಾಲೇಜುಗಳ ಎಲ್ಲಾ ಸ್ಟ್ರೀಮ್‌ಗಳ ಅಂತಿಮ ವರ್ಷದ ಪದವಿ ಪಡೆದ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳುವ ಅವಶ್ಯಕತೆ ಇದ್ದು, ಎಲ್ಲಾ ಪದವಿ ವಿದ್ಯಾರ್ಥಿಗಳನ್ನು ಒಳಗೊಂಡಂತೆ ನೋಂದಣಿ ಕಾರ್ಯಕ್ರಮವನ್ನು ಕಡ್ಡಾಯವಾಗಿ ಹಮ್ಮಿಕೊಳ್ಳಲು ಕೋರುತ್ತಾ, ಆಯಾ ವಿಶ್ವವಿದ್ಯಾನಿಲಯಗಳ ಉಪಕುಲಪತಿಗಳು ಹಾಗೂ ಎಲ್ಲಾ ಪದವಿ ಕಾಲೇಜುಗಳ ಪ್ರಾಂಶುಪಾಲರು ಮತ್ತು ಉದ್ಯೋಗಾಧಿಕಾರಿಗಳು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳೊಂದಿಗೆ ಸಮನ್ವಯತೆ ಸಾಧಿಸಿ, ಕರ್ನಾಟಕ ಸ್ಕಿಲ್ ಕನೆಕ್ಟ್ ಪೋರ್ಟಲ್ ನ ಮೂಲಕ ಹಮ್ಮಿಕೊಳ್ಳಲಾಗಿರುವ ವಿನೂತನ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಹಾಗೂ ಅನುಷ್ಠಾನಗೊಳಿಸಲು ಸಂಬಂಧಿಸಿದ ಅಧಿಕಾರಿ / ಸಿಬ್ಬಂದಿಗಳಿಗೆ ಸೂಕ್ತ ನಿರ್ದೇಶನ ಹಾಗೂ ಆದೇಶ ಹೊರಡಿಸಲು ಕೋರುತ್ತಾ, ತಮ್ಮ ಬೆಂಬಲ ಮತ್ತು ಸಹಕಾರವನ್ನು ಕೋರುತ್ತೇನೆ.

ಶುಭಾಶಯಗಳೊಂದಿಗೆ,

ತಮ್ಮ ವಿಶ್ವಾಸಿ,

(ಉಮಾ ಮಹಾದೇವನ್)

ಶ್ರೀ ಎಸ್.ಆರ್. ಉಮಾಶಂಕರ್, ಭಾ.ಆ.ಸೇ.,
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬಹುಮಹಡಿಗಳ ಕಟ್ಟಡ, ಬೆಂಗಳೂರು.



Generated from eOffice by Madhura, ED-GEN2-ASST(MA), ASSISTANT, EDUCATION HIGHER SEC on 28/11/2023 03:51 PM